ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ,

ಮಂಜೂರಾತಿ ನೀಡಿದ ಕಛೇರಿ ವಿಳಾಸ:

ಮಂಜೂರಾತಿ ನೀಡಿದ ಕಛೇರಿ ವಿಳಾಸ:

ದಿನಾಂಕ: 3/30/26 12:00 AM

[ನಿಯಮ 3 ಉಪನಿಯಮ 5(ಬ)]

ಪ್ರಮಾಣ ಪತ್ರ ಸಂಖ್ಯೆ: /2020 21

VELAMMAL VIDYALAYA (NO 78/1, SINGANAYAKANAHALLI, HESARGHATTA MAIN ROAD, YELAHANKA, BANGALORE-560064)

ಇವರ ಗೌವರ್ನಿಂಗ್ ಕೌನ್ಸಿಲ್ ಈ ಶಿಕ್ಷಣ ಸಂಸ್ಥೆಯ ಹೊಸ ಪ್ರಾಥಮಿಕ ಶಾಲೆಯನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 [ಕರ್ನಾಟಕ ಆಕ್ಟ್ 1995] ಸಕ್ಷನ್ 31ರಂತೆ ಈ ಕೆಳಕಂಡ

ಪೂರ್ವ ಪ್ರಾಥಮಿಕ (Pre-Primary)

1. ಅರ್ಜಿ ಸಂಖ್ಯೆ : PP3003260001646

2. ಕ್ರಮ ಸಂಖ್ಯೆ : 473036

3. ಶಾಲೆಯ ಹೆಸರು ಮತ್ತು ವಿಳಾಸ : VELAMMAL VIDYALAYA (NO 78/1, SINGANAYAKANAHALLI, HESARGHATTA MAIN ROAD, YELAHANKA, BANGALORE-560064)

4. ಅನುಮತಿ ನೀಡಿದ ತರಗತಿ : Pre-primary

5. ಶೈಕ್ಷಣಿಕ ವರ್ಷ : 2026 2027

6. Dise Code :

| Sr. No. | Standard | Medium |
|---|---|---|
| 1 | UKG | English |
| 2 | LKG | English |

ಸದರಿ ಶಿಕ್ಷಣ ಸಂಸ್ಥೆಯನ್ನು ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೋಂದಾಯಿಸಲಾಗಿದೆ. ಕ್ರಮ ಸಂಖ್ಯೆ / ಪುಟ ಸಂಖ್ಯೆ / ವಾಲ್ಯೂಂ ಸಂಖ್ಯೆ : 02 | 174/175 | 03.

**ಷರತ್ತುಗಳು**

1. ಈ ನೋಂದಣಿಯು ನಿಯಮ 3[5][4]ಕ್ಕೆ ಒಳಪಟ್ಟಿರುತ್ತದೆ.
2. ಗೌವರ್ನಿಂಗ್ ಕೌನ್ಸಿಲ್ ಇವರು ನಿಯಮ 4[4]ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
3. ಶಾಲಾ ನಿವೇಶನ, ವಿಸ್ತೀರ್ಣ, ಕಟ್ಟಡ, ಪೀಠೋಪಕರಣಗಳು, ಸಿಬ್ಬಂದಿ ವರ್ಗ ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
4. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು.
5. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 [ಕರ್ನಾಟಕ ಆಕ್ಟ್ ಸಂಖ್ಯೆ: 1:96] ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.
6. ಇಲಾಖೆ ಹಾಗೂ ಸರ್ಕಾರ ನಿಗದಿಪಡಿಸಿದ ಪಠ್ಯಪುಸ್ತಕ, ಪರೀಕ್ಷಾ ಕ್ರಮಗಳನ್ನು ಮಾತ್ರ ತಪ್ಪದೇ ಅಳವಡಿಸತಕ್ಕದ್ದು.
7. ಅನುಮತಿ ನೀಡಿದ ಪ್ರತಿಯೊಂದು ತರಗತಿ/ವಿಭಾಗಗಳಲ್ಲಿ ಪ್ರತಿಯೊಂದು ವಿಭಾಗದಲ್ಲಿ ಗರಿಷ್ಠ 30 ಮಕ್ಕಳಿರಬೇಕು.
8. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8ರ ಅಡಿಯಲ್ಲಿ ಉಪಬಂಧ 36 39ರಂತೆ ನೋಂದಾಯಿಸಿದ ಎಲ್ಲಾ ಶಾಲೆಗಳ ಮಾನ್ಯತೆ ವ್ಯಾಪ್ತಿಗೆ ಬರುವುದು.
9. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.
10. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲಾ ಉಪನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.
11. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿ ಮಾಹಿತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭದ ಮೂರು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಾನಾಗೇ ರದ್ದಾಗುವುದು.

Scanned with OKEN Scanner

12. ಶಾಲೆಯ ಕಟ್ಟಡದ ಸುರಕ್ಷತೆ ಬಗ್ಗೆ ಬೆಂಕಿ, ಬಿರುಗಾಳಿ, ವಿದ್ಯುತ್ ಅಪಘಾತ ಅವಘಡಗಳಿಂದ ಸುರಕ್ಷಿತವಾಗಿರುವ ಬಗ್ಗೆ ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು. ಶಾಲಾ ಆವರಣದಲ್ಲಿ 100 ಗಜಗಳ ಅಂತರದಲ್ಲಿ ತಂಬಾಕು ಉತ್ಪನ್ನಗಳ ಮಾರಾಟವನ್ನು ನಿಷೇಧಿಸಿದೆ ಎಂದು ಶಾಲಾ ಮುಂಭಾಗದಲ್ಲಿ ಪ್ರಕಟಣೆ ನೀಡುವುದು.

13. ಶಾಲೆಯಲ್ಲಿ ಹೆಣ್ಣು ಮಕ್ಕಳಿಗೆ ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕವಾದ ಶೌಚಾಲಯದ ವ್ಯವಸ್ಥೆಯನ್ನು ಕಡ್ಡಾಯವಾಗಿ ಒದಗಿಸಬೇಕು ಮತ್ತು ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಒದಗಿಸಬೇಕು.

14. ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 369 ಪಿ.ಜಿ.ಸಿ 2014 ದಿನಾಂಕ:11 11 2014 ರಂತೆ ಮತ್ತು ಈ ಕಚೇರಿ ಸುತ್ತೋಲೆ ದಿನಾಂಕ: 14 11 2014 ರಂತೆ ಷರತ್ತುಗಳನ್ನು ಪಾಲಿಸುವುದು.

15. ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 709 ಪಿ.ಜಿ.ಸಿ.2017 ದಿನಾಂಕ:07 03 2018 ರಂತೆ ಮತ್ತು ಈ ಕಚೇರಿ ಸುತ್ತೋಲೆ ದಿನಾಂಕ: 25 11 2019 ರಂತೆ ಷರತ್ತುಗಳನ್ನು ಖಚಿತಪಡಿಸಿಕೊಳ್ಳತಕ್ಕದ್ದು.

16. ಮಹಾನಿರ್ದೇಶಕರು, ಕರ್ನಾಟಕ ರಾಜ್ಯ ಅಗ್ನಿ ಶಾಮಕ ಮತ್ತು ತುರ್ತು ಸೇವೆಗಳು, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ ಜಿಬಿಸಿ (1) 502/2004 ದಿನಾಂಕ:08 07 2020 ರಂತೆ ಅಗ್ನಿ ಸುರಕ್ಷತೆಗೆ ಸಂಬಂಧಿಸಿದಂತೆ . ಮಹಾನಿರ್ದೇಶಕರು, ಕರ್ನಾಟಕ ರಾಜ್ಯ ಅಗ್ನಿ ಶಾಮಕ ಮತ್ತು ತುರ್ತು ಸೇವೆಗಳು, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ ಜಿಬಿಸಿ (1) 502/2004 ದಿನಾಂಕ: 08 07 2020 ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಕಾಲಕಾಲಕ್ಕೆ ನವೀಕರಿಸಿ ಸಂಬಂಧಿಸಿದ ಉಪನಿರ್ದೇಶಕರಿಗೆ ಸಲ್ಲಿಸುವುದು.

17. ಕಟ್ಟಡ ಸುರಕ್ಷತೆಗೆ ಸಂಬಂಧಿಸಿದಂತೆ ಪ್ರಮಾಣ ಪತ್ರವನ್ನು ಕಾಲ ಕಾಲಕ್ಕೆ ಸಕ್ಷಮ ಪ್ರಾಧಿಕಾರದಿಂದ ನವೀಕರಿಸಿ ಸಂಬಂಧಿಸಿದ ಉಪನಿರ್ದೇಶಕರಿಗೆ ಸಲ್ಲಿಸುವುದು.

18. ಆನ್ ಲೈನ್ ನಲ್ಲಿ ಅಪ್ ಲೋಡ್ ಮಾಡಿದ ದಾಖಲೆಗಳು ನೈಜತೆಯಿಂದ ಕೂಡಿರದಿದ್ದಲ್ಲಿ ಈ ಆದೇಶವು ತಂತಾನೆ ರದ್ದಾಗುತ್ತದೆ.

19. ಪ್ರಥಮ ಮಾನ್ಯತೆಗಾಗಿ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸುವುದು. ಕ್ಷೇತ್ರಶಿಕ್ಷಣಾಧಿಕಾರಿಗಳು ಶಿಕ್ಷಣ ಕಾಯ್ದೆ 1983 ಮತ್ತು ಸರ್ಕಾರದ ಆದೇಶ ದಿನಾಂಕ: 30 09 2007ರ ಅನುಬಂಧ 3ರ ಚೆಕ್ ಲಿಸ್ಟ್ ಮಾಹಿತಿ ಪಡೆದು ಈ ಆಧಾರದ ಮೇಲೆ ಶಾಲೆ ಪ್ರಾರಂಭಿಸಿದ ಮೂರು ತಿಂಗಳೊಳಗೆ ಕಡ್ಡಾಯವಾಗಿ ಪ್ರಥಮ ಮಾನ್ಯತೆ ನೀಡುವುದು. ನಿಗದಿತ ಅವಧಿಯೊಳಗೆ ಮಾನ್ಯತೆ ಪಡೆಯದಿದ್ದಲ್ಲಿ ನೋಂದಣಿ ತಂತಾನೆ ರದ್ದಾಗುತ್ತದೆ.

20. ಆಡಳಿತ ಮಂಡಳಿಯು ತಪ್ಪು ಮಾಹಿತಿ/ ನಕಲಿ ದಾಖಲೆಗಳನ್ನು ನೀಡಿ ನೊಂದಣಿಯನ್ನು ಪಡೆದಿದ್ದು ಸಾಬೀತಾದಲ್ಲಿ ಸದರಿ ನೋಂದಣಿಯನ್ನು ಹಿಂಪಡೆದು ಆಡಳಿತ ಮಂಡಳಿ ವಿರುದ್ಧ ಕ್ರಿಮಿನಲ್ ಮೊಕ್ಕದಮೆ ದಾಖಲಿಸಲು ಕ್ರಮವಹಿಸುವುದು ಹಾಗೂ ಆಡಳಿತ ಮಂಡಳಿಗೆ ಆರ್.ಟಿ.ಇ ನಿಯಮದಡಿಯಲ್ಲಿ 10 ಲಕ್ಷದ ವರೆಗೆ ದಂಡನೆಯನ್ನು ವಿಧಿಸುವುದು.

21. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 709 ಪಿ.ಜಿ.ಸಿ 2017 ದಿನಾಂಕ: 07.03.2018ರಂತೆ ಮತ್ತು ಈ ಕಛೇರಿ ಸುತ್ತೋಲೆ ದಿನಾಂಕ: 26.03.2018ರಂತೆ ಷರತ್ತುಗಳನ್ನು ಪಾಲಿಸಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

ಕ್ಷೇತ್ರ ಶಿಕ್ಷಣಾಧಿಕಾರಿಗಳು,
ಶಾಲಾ ಶಿಕ್ಷಣ ಇಲಾಖೆ,
ಉತ್ತರ ವಲಯ-04, ಯಲಹಂಕ
ಬೆಂಗಳೂರು 560064

1. ಕಾರ್ಯದರ್ಶಿಗಳು, VELAMMAL VIDYALAYA (NO 78/1, SINGANAYAKANAHALLI, HESARGHATTA MAIN ROAD, YELAHANKA, BANGALORE-560064)
2. ಕಛೇರಿ ಪ್ರತಿ

Scanned with OKEN Scanner